7. ವಿರೋಧ ಪಕ್ಷದ ಸದಸ್ಯರನ್ನು ಸದನಕ್ಕೆ ಕರೆಸಲು ಮನವಿ

ಶ್ರೀ ಪಿ.ಎಂ.ನರೇಂದ್ರಸ್ವಾಮಿ: ವಿರೋಧ ಪಕ್ಷಗಳವರನ್ನು ಸದನಕ್ಕೆ ಕರೆಸಲು ಒಂದು ಪ್ರಯತ್ನವನ್ನು ಮಾಡುವುದು ಸೂಕ್ತವೆನ್ನುವುದು ನನ್ನ ವೈಯಕ್ತಿಕವಾದಂಥ ಸಲಹೆ. ಇನ್ನೊಮ್ಮೆ ಆ ಪ್ರಯತ್ನವನ್ನು ಮಾಡಿ. ಬಿಲ್‌ಗಳನ್ನು ಪಾಸ್ ಮಾಡುವುದಕ್ಕೆ ನಮ್ಮ ಯಾವುದೇ ತರಹದ ಅಭ್ಯಂತರವಿಲ್ಲ. ದಯಮಾಡಿ ಇನ್ನೊಮ್ಮೆ ಪ್ರಯತ್ನ ಮಾಡಿ ಎನ್ನುವುದು ನನ್ನ ಮನವಿ. ರಾಜ್ಯಕ್ಕೆ ಒಂದು ಒಳ್ಳೆಯ ಸಂದೇಶ ಹೋಗಲಿ. ದಯವಿಟ್ಟು ಇದಕ್ಕೆ ಅವಕಾಶವನ್ನು ಮಾಡಿಕೊಡಿ ಎಂದು ಕೇಳುತ್ತಿದ್ದೇನೆ.

ಅಧ್ಯಕ್ಷರು: ಅವರು ದೂರವಾಣಿ ಸಂಪರ್ಕ ಮಾಡಿದರೂ ಸಿಗುತ್ತಿಲ್ಲ, ಏನು ಮಾಡುವುದು ಹೇಳಿ?

ಶ್ರೀ ಪಿ.ಎಂ. ನರೇಂದ್ರಸ್ವಾಮಿ: ಈ ವಿಚಾರದಲ್ಲಿ ತಾವು ತೆಗೆದುಕೊಳ್ಳುತ್ತಿರುವ ಏಕಪಕ್ಷೀಯ ನಿರ್ಣಯಕ್ಕೆ ವಿರೋಧ ವ್ಯಕ್ತಪಡಿಸಿ ಸದನದಿಂದ ಹೊರಗೆ ಹೋಗುತ್ತಿದ್ದೇನೆ.

ಶ್ರೀ ಸಿ.ಟಿ.ರವಿ: ನೀವೇ ಪ್ರಯತ್ನ ಮಾಡಬಹುದಲ್ಲ.?

(ಈ ಹಂತದಲ್ಲಿ ಪಕ್ಷೇತರ ಸದಸ್ಯರಾದ ಶ್ರೀ ಪಿ.ಎಂ. ನರೇಂದ್ರಸ್ವಾಮಿಯವರು ಸಭಾತ್ಯಾಗ ಮಾಡಿದರು)

8. ವಿತ್ತೀಯ ಕಾರ್ಯಕಲಾಪಗಳು

ಅಧ್ಯಕ್ಷರು: ಈಗ 2011–12ನೇ ಸಾಲಿನ ಈ ಕೆಳಕಂಡ ಬೇಡಿಕೆಗಳ ಮಂಡನೆ.

ಅನುದಾನ ಬೇಡಿಕೆಗಳು2011–12

ಬೇಡಿಕೆ ಸಂಖ್ಯೆ: 4 – ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2012ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 40,754.31 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 500.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 3 – ಆರ್ಥಿಕ